# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:13ನೇ ಡಿಸೆಂಬರ್, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆಗಳು

### 02. ಪ್ರಶ್ನೋತ್ತರ

| | | |
|---|---|---|
| ಅ) | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : ಒಂದನೆಯ ಪಟ್ಟಿ |
| ಆ) | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : ಒಂದನೆಯ ಪಟ್ಟಿ |

### 03. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 04. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು 2013ನೇ ಸಾಲಿನಲ್ಲಿ ತಲೆಯ ಮೇಲೆ ಮಲಹೊರುವ ಪದ್ಧತಿಯನ್ನು ನಿಷೇಧಿಸಿದ್ದರೂ ಸಹ ರಾಜ್ಯದ ಆನೇಕ ಜಿಲ್ಲೆಗಳಲ್ಲಿ ಈಗಲೂ ಸಹ ಹಸ್ತಚಾಲಿತ ಸ್ಕ್ಯಾವೆಂಜಿಂಗ್ ಪದ್ಧತಿ ಚಾಲ್ತಿಯಲ್ಲಿರುವ ವಿಷಯದ ಕುರಿತು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು.** ಅವರು ಕಬ್ಬಿಗೆ ವೈಜ್ಞಾನಿಕವಾದ ಬೆಲೆ ನಿಗದಿಪಡಿಸಿ, ಕಬ್ಬು ಬೆಳೆಗಾರರಿಗೆ ಸಕಾಲದಲ್ಲಿ ಬಾಕಿ ಹಣ ಪಾವತಿಸುವ ಬಗ್ಗೆ ಮಾನ್ಯ ಕೈಮಗ್ಗ, ಜವಳಿ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಕೆ.ಟಿ.ಶ್ರೀಕಂಠೇಗೌಡ** ಅವರು ಕೃಷಿ ಉದ್ದೇಶಕ್ಕಾಗಿ ಬಳಸುವ ಭೂಮಿಯ ಸರ್ವೆ ನಂಬರ್‌ಗಳ ಕನಿಷ್ಠ ವಿಸ್ತೀರ್ಣವನ್ನು ಕೊಡಗು, ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮೂರು ಗುಂಟೆಗೆ ನಿಗದಿಪಡಿಸಿ, ಇನ್ನುಳಿದ ಜಿಲ್ಲೆಗಳಲ್ಲಿ ಐದು ಗುಂಟೆಗೆ ನಿಗದಿಪಡಿಸಿರುವುದರಿಂದ ಸಣ್ಣ ಹಿಡುವಳಿ ಜಮೀನು ಹೊಂದಿರುವ ರೈತರುಗಳು ವಿಭಾಗ ಮಾಡಿಕೊಳ್ಳಲು ಹಾಗೂ ಮಾರಾಟ ಮಾಡಲು ಸಾಧ್ಯವಾಗುತ್ತಿಲ್ಲದಿರುವುದರಿಂದ ದಿನಾಂಕ:12.11.2021ರ ಆದೇಶ ಸಂಖ್ಯೆ:ಕಂ.ಇ.85 ಭೂದಾನ 2018ನ್ನು ಹಿಂದಕ್ಕೆ ಪಡೆಯುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀ ಪುಟ್ಟಣ್ಣ** ಅವರು ಸರ್.ಎಂ. ವಿಶ್ವೇಶ್ವರಯ್ಯ 2ನೇ ಹಂತ ಬಡಾವಣೆ ರಚನೆಗಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಬೆಂಗಳೂರು ಉತ್ತರ ತಾಲ್ಲೂಕಿನ ಯಶವಂತಪುರ ಹೋಬಳಿಯ ಉಲ್ಲಾಳ ಗ್ರಾಮದಲ್ಲಿ ವಶಪಡಿಸಿಕೊಂಡಿರುವ ಜಮೀನುಗಳ ಭೂ ಮಾಲೀಕರಿಗೆ ಪರಿಹಾರ ನೀಡದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಪುಟ್ಟಣ್ಣ, ಅರುಣ ಶಹಾಪುರ ಮತ್ತು ಎಸ್.ವ್ಹಿ.ಸಂಕನೂರ** ಅವರುಗಳು ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಗಳನ್ನು ನಿಯಮ ಬಾಹಿರವಾಗಿ ತಿರಸ್ಕರಿಸುತ್ತಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರು ಗ್ರಾಮಗಳಲ್ಲಿರುವ ನ್ಯಾಯಬೆಲೆ ಅಂಗಡಿಗಳು ಗ್ರಾಮದಿಂದ 3-4 ಕಿ.ಮೀ. ದೂರವಿರುವ ಕಾರಣ, ತಾಂಡಾ ಜನರಿಗೆ ಅನಾನುಕೂಲವಾಗುತ್ತಿರುವುದರಿಂದ ಕನಿಷ್ಠ 100 ರೇಷನ್ ಕಾರ್ಡ್ ಹೊಂದಿರುವ ಪ್ರತಿಯೊಂದು ತಾಂಡಾಗಳಿಗೆ ಒಂದು ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವುದಾಗಿ ಘೋಷಣೆ ಮಾಡಿದ್ದರೂ ಸಹ ಸದರಿ ಯೋಜನೆಯನ್ನು ಜಾರಿಗೆ ತಂದಿಲ್ಲದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**